# All India Radio: Bangalore
# Regional Bulletin In Kannada
# 17.12.2025 / 6.40 p.m.

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ವಿಧಾನಸಭೆಯಲ್ಲಿ ಗೃಹಲಕ್ಷ್ಮೀ ಗದ್ದಲ ; ಕ್ಷಮೆಯಾಚನೆಗೆ ಬಿಜೆಪಿ, ಜೆಡಿಎಸ್ ಪಟ್ಟು - ಸಭಾತ್ಯಾಗ

೨. ಹದಿನೈದು ವರ್ಷ ಮೀರಿದ ವಾಹನಗಳನ್ನು ಗುಜರಿಗೆ ಹಾಕಲು ಸರ್ಕಾರ ನಿರ್ಧಾರ

೩. ರಾಜ್ಯದ ಎಲ್ಲಾ ಕಂದಾಯ ಗ್ರಾಮಗಳ ಕೃಷಿ ಜಮೀನುಗಳಲ್ಲಿ ಬೆಳೆ ಸಮೀಕ್ಷೆ - ಕೃಷಿ ಸಚಿವ ಚಲುವರಾಯಸ್ವಾಮಿ

೪. ಇದೇ ೨೧ರಂದು ದೇಶದಾದ್ಯಂತ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ; ೫ ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಕಡ್ಡಾಯ

೫. ಮೈಸೂರನ್ನು ದೇಶದ ಅಗ್ರ ಸ್ವಚ್ಛ ನಗರವನ್ನಾಗಿಸಲು ಪಣ ; ಮಹಾನಗರ ಪಾಲಿಕೆಯಿಂದ ವಿದ್ಯಾರ್ಥಿಗಳಿಗೆ ಪರಿಸರ ರೀಲ್ಸ್ ಸ್ಪರ್ಧೆ

***************

ವಿಧಾನಸಭೆಯಲ್ಲಿ ಇಂದು ಗೃಹಲಕ್ಷ್ಮೀ ಯೋಜನೆ ಕುರಿತಂತೆ ಗದ್ದಲ ನಡೆಯಿತು. ಮಹಿಳೆಯರ ಖಾತೆಗೆ ಸರ್ಕಾರ ೨ ತಿಂಗಳ ಹಣ ಹಾಕಿಲ್ಲ ಎಂದು ವಿಪಕ್ಷಗಳ ಸದಸ್ಯರು ಅಸಮಧಾನ ವ್ಯಕ್ತಪಡಿಸಿದರು. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಈ ಕುರಿತಂತೆ ಸ್ಪಷ್ಟನೆ ನೀಡಬೇಕು ಹಾಗೂ ಕ್ಷಮೆಯಾಚಿಸುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದರು.

ಈ ವೇಳೆ ಎರಡು ತಿಂಗಳ ಹಣ ಬಾಕಿಯಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಒಪ್ಪಿಕೊಂಡರು.

ಎರಡು ತಿಂಗಳ ಕಂತು ಬಿಡುಗಡೆ ಬಗ್ಗೆ ಸಚಿವರು ಈ ಹಿಂದೆ ತಪ್ಪು ಉತ್ತರ ನೀಡಿದ್ದು, ಕ್ಷಮೆ ಯಾಚಿಸುವಂತೆ ವಿಪಕ್ಷಗಳು ಆಗ್ರಹಿಸಿದವು. ಪ್ರತಿಪಕ್ಷ ಸದಸ್ಯರ ಮನವೊಲಿಸಲು ಸಭಾಧ್ಯಕ್ಷರು ಪ್ರಯತ್ನಿಸಿದರೂ ಕ್ಷಮೆಯಾಚನೆಗೆ ಬಿಜೆಪಿ ನಾಯಕರು ಪಟ್ಟು ಹಿಡಿದರು. ಎರಡು ತಿಂಗಳ ಹಣ ಯಾವಾಗ ಮಹಿಳೆಯರ ಖಾತೆ ಹಾಕಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿಲ್ಲ, ಈ ಹಿನ್ನೆಲೆಯಲ್ಲಿ ಸಭಾತ್ಯಾಗ ಮಾಡುವುದಾಗಿ ಆರ್. ಅಶೋಕ ತಿಳಿಸಿದರು. ಸಚಿವರ ಉತ್ತರದಿಂದ ತೃಪ್ತರಾಗದ ಬಿಜೆಪಿ, ಜೆಡಿಎಸ್ ಸದಸ್ಯರು ಸಭಾತ್ಯಾಗ ನಡೆಸಿದರು.

***************

ನರೇಗಾ ಯೋಜನೆಯಡಿ ಪೂರ್ಣ ಪ್ರಮಾಣದ ಹಣ ನೀಡುವ ಬದಲು ಶೇಕಡ ೪೦ರಷ್ಟು ಕಡಿತ ಮಾಡಿರುವ ಕೇಂದ್ರ ಸರ್ಕಾರದ ವಿರುದ್ಧ ಸಚಿವ ಎಚ್.ಕೆ.ಪಾಟೀಲ್ ವಿಧಾನಸಭೆಯಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ವೇಳೆ ನರೇಗಾ ಯೋಜನೆ ಬಗ್ಗೆ ಪ್ರತ್ಯೇಕವಾದ ಚರ್ಚೆ ನಡೆಸಲು ಸಿದ್ಧವಿರುವುದಾಗಿ ಬಿಜೆಪಿ ಶಾಸಕರು ಪ್ರತಿ ಸವಾಲು ಹಾಕಿದ್ದಾರೆ.

ಇದೇ ವೇಳೆ, ಗೃಹಲಕ್ಷ್ಮೀ ಹಣ ಬಾಕಿ ವಿಚಾರವಾಗಿ ನಡೆದ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಭದ್ರಾ ಮೇಲ್ದಂಡೆ ಯೋಜನೆ ಅನುದಾನ, ನರೇಗಾ, ಜಲಜೀವನ್ ಮಿಷನ್, ಬಾಕಿ ಅನುದಾನ ಬಿಡುಗಡೆ ಮಾಡದ ಕೇಂದ್ರ ಸರ್ಕಾರ ದಿವಾಳಿಯಾಗಿದೆ ಎನ್ನಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ನಮ್ಮ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡಿ ಬಿಜೆಪಿ ಬೇರೆ ರಾಜ್ಯಗಳಲ್ಲಿ ಗೆಲ್ಲುತ್ತಿದೆ ಎಂದು ತಿಳಿಸಿದ್ದಾರೆ.

ತರಿಕೆರೆಯ ಶಾಸಕ ಜಿ.ಎಚ್. ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರಿಸಿದ ಕೃಷಿ ಸಚಿವ ಚಲುವರಾಯಸ್ವಾಮಿ ರಾಜ್ಯದಲ್ಲಿ ೪ ಕೋಟಿ ೪ ಲಕ್ಷ ರೈತರ ಬೆಳೆ ಮಾಹಿತಿಯನ್ನು ಬೆಳೆ ಸಮೀಕ್ಷೆ ರೈತರ ಆಪ್‌ನಲ್ಲಿ ದಾಖಲಿಸಲಾಗಿದೆ. ರಾಜ್ಯದ ಎಲ್ಲಾ ಕಂದಾಯ ಗ್ರಾಮಗಳ ಕೃಷಿ ಜಮೀನುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಹದಿನೈದು ವರ್ಷ ಮೀರಿದ ವಾಹನಗಳನ್ನು ಗುಜರಿಗೆ ಹಾಕಲು ಸರ್ಕಾರ ಅನುಮೋದನೆ ನೀಡಿದೆ ಎಂದು ಪರಿಷತ್‌ನಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ನೋಂದಣಿಗೆ ಆರ್‌ಟಿಓಗಳಲ್ಲಿ ನಕಲಿ ದಾಖಲೆ ಸೃಷ್ಟಿಸಿದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ. ಸರ್ಕಾರದ ಉಪವಿಭಾಗಾಧಿಕಾರಿಗಳ ಎ.ಸಿ.ಕೋರ್ಟ್ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಕಳೆದ ಎರಡೂವರೆ ವರ್ಷದಲ್ಲಿ ರಾಜ್ಯ ಸರ್ಕಾರವು ಶೇಕಡ ೮೦ರಷ್ಟು ವಿಲೇವಾರಿ ಮಾಡಿದ್ದು, ಇನ್ನುಳಿದ ಬಾಕಿ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ಯೋಜನೆ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಬಾಕಿ ಉಳಿದಿರುವ ಮ್ಯೂಜಿಯಂ ಕೆಲಸವನ್ನು ಶೀಘ್ರವೇ ಪೂರ್ಣಗೊಳಿಸುವುದಾಗಿ ಭರವಸೆ ನೀಡಿದ್ದಾರೆ. ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ೩೨ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ೨ ಸಾವಿರದ ೯೭೬ ಬೋಧಕ ಹಾಗೂ ೬ ಸಾವಿರದ ೨೯೫ ಬೋಧಕೇತರ ಹುದ್ದೆಗಳು ಖಾಲಿ ಇವೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ತಿಳಿಸಿದ್ದಾರೆ. ಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಸಿ.ಟಿ.ರವಿ ಕೇಳಿದ ಪ್ರಶ್ನೆಗೆ  ಉತ್ತರ ನೀಡಿದ ಸಚಿವರು, ಕುಲಪತಿಗಳ ನೇಮಕ ಮಾಡಲು ಶೋಧನಾ ಸಮಿತಿ ರಚನೆ ಮಾಡಲಾಗಿದೆ. ಸಮಿತಿ ಈಗಾಗಲೇ ಅನೇಕ ಸಭೆಗಳನ್ನು ನಡೆಸಿದೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದ್ದಾರೆ.

***************

ರಾಜ್ಯದ ಕರಾವಳಿ ಪ್ರದೇಶದಲ್ಲಿನ ೧೦೬  ದ್ವೀಪಗಳನ್ನು ಪರಿಸರ ಹಾಗೂ ಪ್ರವಾಸೋದ್ಯಮ ಚಟುವಟಿಕೆಗಳ ಕೇಂದ್ರಗಳಾಗಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ ಎಂದು  ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವ ಮಂಕಾಳ ವೈದ್ಯ ತಿಳಿಸಿದ್ದಾರೆ. ವಿಧಾನ ಪರಿಷತ್ ನಲ್ಲಿ ಸದಸ್ಯ ರಮೇಶ್ ಬಾಬು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಉಡುಪಿ ಜಿಲ್ಲೆಯ ೬ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ೧ ದ್ವೀಪಗಳಿಗೆ ಕಾರ್ಯಸಾಧ್ಯತಾ ವರದಿ ತಯಾರಿಸಲಾಗಿದೆ. ಈ ಪೈಕಿ ೩ ದ್ವೀಪಗಳಾದ ದರಿಯಾ ಬಹದ್ದೂರ್ ಘಡ, ಮಲ್ಪೆ ಮತ್ತು ಅಯಾಬಾ ದ್ವೀಪಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಭಾರತವು ಪೋಲಿಯೋ ಮುಕ್ತ ರಾಷ್ಟ್ರವಾಗಿ ೧೪ ವರ್ಷ ಕಳೆದಿದೆ. ಇದು ಒಂದು ಮಹತ್ತರ ಸಾಧನೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಭಾರತದ ನೆರೆಯ ರಾಷ್ಟ್ರಗಳಲ್ಲಿ Wild Polio Virus ಸಂಭಾವ್ಯ ಹರಡುವಿಕೆಯು ಇಂದಿಗೂ ಜಗತ್ತಿನಾದ್ಯಂತ ಹಾಗೂ ಭಾರತದ ಮಕ್ಕಳನ್ನು ಅಪಾಯದಂಚಿನಲ್ಲಿರಿಸಿದೆ. ಮುಂಜಾಗ್ರತಾ ದೃಷ್ಟಿಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ದೇಶದಲ್ಲಿ ಮುಂದುವರಿಸಲಾಗಿದೆ. ತಜ್ಞರ ಸಲಹೆ ಹಿನ್ನೆಲೆಯಲ್ಲಿ ೫ ವರ್ಷದೊಳಗಿನ ಎಲ್ಲಾ ಮಕ್ಕಳನ್ನು ವ್ಯಾಪ್ತಿಗೊಳಪಡಿಸುವಂತೆ ರಾಷ್ಟ್ರೀಯ ಲಸಿಕಾ ದಿನವನ್ನು ಇದೇ ೨೧ರಂದು  ನಡೆಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಪ್ರತಿ ವರ್ಷದಂತೆ ಈ ವರ್ಷವೂ ಇದೇ ೨೧ರಂದು ಹಮ್ಮಿಕೊಳ್ಳಲಾಗಿರುವ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪ್ರತಿ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ನೀಡಲಾಗುತ್ತಿದೆ. ಅಂದಾಜು ೬.೨ ಲಕ್ಷ ಮಕ್ಕಳನ್ನು ತಲುಪಿಸುವ ಗುರಿ ಹೊಂದಲಾಗಿದೆ. ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯಲಿರುವ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ-೨೦೨೫ ಕುರಿತ ಪೂರ್ವ ಸಿದ್ಧತಾ ಸಭೆಯನ್ನು ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅಧ್ಯಕ್ಷತೆಯಲ್ಲಿ ಇಂದು ನಡೆಸಲಾಯಿತು.

***************

ಮೈಸೂರು ನಗರದ ಸುಂದರ ಪರಿಸರವನ್ನು ಕಾಪಾಡುವ ನಿಟ್ಟಿನಲ್ಲಿ ಮತ್ತು ಸ್ವಚ್ಛತೆಯ ಬಗ್ಗೆ ಯುವಜನತೆಯಲ್ಲಿ ಜಾಗೃತಿ ಮೂಡಿಸಲು ಮೈಸೂರು ಮಹಾನಗರ ಪಾಲಿಕೆಯು ಕಾಲೇಜು ವಿದ್ಯಾರ್ಥಿಗಳಿಗಾಗಿ "ಪರಿಸರ ರೀಲ್ಸ್" ಸ್ಪರ್ಧೆ ಆಯೋಜಿಸಿದೆ.

ಈ ಸ್ಪರ್ಧೆಯ ಮೂಲಕ ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸಲು ವೇದಿಕೆ ಕಲ್ಪಿಸಲಾಗಿದೆ. ಮೈಸೂರನ್ನು ದೇಶದ ನಂಬರ್ ೧ ಸ್ವಚ್ಛ ನಗರವನ್ನಾಗಿಸಲು ಎಲ್ಲರೂ ಕೈಜೋಡಿಸಬೇಕೆಂದು ಪಾಲಿಕೆ ಕರೆ ನೀಡಿದೆ. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕಸವನ್ನು ಮೂಲದಲ್ಲೇ ವರ್ಗೀಕರಿಸುವುದು, ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯುವವರಲ್ಲಿ ಜಾಗೃತಿ ಮೂಡಿಸುವುದು, ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧ ಅಥವಾ ನೀರಿನ ಮರುಬಳಕೆ ಈ ನಾಲ್ಕು ಪ್ರಮುಖ ವಿಷಯಗಳಲ್ಲಿ ಯಾವುದಾದರೂ ಒಂದರ ಕುರಿತು ತಮ್ಮ ವಿಶಿಷ್ಟ

ಆಲೋಚನೆಯನ್ನು ರೀಲ್ಸ್ ರೂಪದಲ್ಲಿ ಪ್ರಸ್ತುತಪಡಿಸಬೇಕಿದೆ. ಸಿದ್ಧಪಡಿಸುವ ರೀಲ್ಸ್‌ನ ಅವಧಿಯು ಒಂದು ನಿಮಿಷ ಮೀರಿರಬಾರದು ಎಂದು ಪಾಲಿಕೆ ಸ್ಪಷ್ಟಪಡಿಸಿದೆ.

***************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ವಿವಿಧ ಕೆರೆಗಳ ಒತ್ತುವರಿಯಾದರೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್.ಎಚ್.ವಿ. ಎಚ್ಚರಿಸಿದ್ದಾರೆ. ಮಂಗಳೂರಿನಲ್ಲಿಂದು ಜಿಲ್ಲಾ ಮಟ್ಟದ ಕೆರೆ ಅಭಿವೃದ್ಧಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆರೆಗಳ ರಕ್ಷಣೆಗೆ ಸಂಬಂಧಿಸಿದ ಇಲಾಖೆಗಳು ನಿರಂತರ ಗಸ್ತು ನಿರ್ವಹಿಸಬೇಕು. ಕೆರೆಗಳು ಒತ್ತುವರಿಯಾಗದಂತೆ ನಿಗಾವಹಿಸಬೇಕು ಎಂದು ಸೂಚನೆ ನೀಡಿದ್ದಾರೆ.

***************

ಸಣ್ಣ, ಸೂಕ್ಷ್ಮ ಹಾಗೂ ಮಧ್ಯಮ ಕೈಗಾರಿಕೆಗಳ ಉತ್ಪನ್ನಗಳ ತಯಾರಿಕೆ ಹಾಗೂ ಗುಣಮಟ್ಟದ ಪರಿಸರ ಸ್ನೇಹಿ ಉತ್ಪನ್ನಗಳ ಬಗ್ಗೆ ಹೆಚ್ಚು ಒತ್ತು ನೀಡಬೇಕು ಎಂದು ಉಡುಪಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರತೀಕ್ ಬಾಯಲ್ ಉದ್ದಿಮೆದಾರರಿಗೆ ಕರೆ ನೀಡಿದ್ದಾರೆ. ಸಣ್ಣ ಹಾಗೂ ಅತಿಸಣ್ಣ ಕೈಗಾರಿಕೆಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ ಕುರಿತಂತೆ ನಡೆದ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಈ ಕೈಗಾರಿಕೆಗಳು ಆರ್ಥಿಕತೆಯ ಲಾಭಕ್ಕೆ ಹೆಚ್ಚು ಒತ್ತು ನೀಡುವ ಜೊತೆಗೆ ಪರಿಸರ ಸ್ನೇಹಿ ಹಾಗೂ ಆರೋಗ್ಯದಾಯಕ ಉತ್ಪನ್ನಗಳ ತಯಾರಿಕೆಗೆ ಮುಂದಾಗಬೇಕು ಎಂದು ತಿಳಿಸಿದ್ದಾರೆ.

***************

ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿಗೆ ರೈತರಿಂದ ನೋಂದಣಿ ಕಾರ್ಯ ಸ್ಥಗಿತಗೊಳಿಸಿರುವುದನ್ನು ಮುಂದುವರಿಸಿ ಹಾಗೂ ರಾಗಿ ಖರೀದಿ ಪ್ರಮಾಣ ಹೆಚ್ಚಿಸಬೇಕೆಂದು ಒತ್ತಾಯಿಸಿ, ದೊಡ್ಡಬಳ್ಳಾಪುರದಲ್ಲಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ನೇತೃತ್ವದಲ್ಲಿ ರೈತರು ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು. ಮಳೆ ಕಾರಣದಿಂದಾಗಿ ರಾಗಿ ಕೊಯ್ಲಿನಲ್ಲಿ ರೈತರು ತೊಡಗಿಸಿಕೊಂಡಿದ್ದರಿಂದ ನೋಂದಣಿ ಮಾಡಿಸುವ ಪ್ರಕ್ರಿಯೆ ನಿಧಾನವಾಗಿದೆ. ಸಾಕಷ್ಟು ರೈತರು ನೋಂದಣಿ ಮಾಡಿಕೊಳ್ಳಬೇಕಿರುವುದರಿಂದ ರಾಗಿ ಖರೀದಿ ಪ್ರಮಾಣ ಹೆಚ್ಚಿಸಿ, ನೋಂದಣಿ ಪ್ರಕ್ರಿಯೆ ಮುಂದುವರೆಸಬೇಕೆಂದು ರೈತ ಮುಖಂಡರು ಒತ್ತಾಯಿಸಿದ್ದಾರೆ.

***************

ಯಾದಗಿರಿ ಜಿಲ್ಲೆಯಲ್ಲಿನ ಶಾಲಾ, ಕಾಲೇಜು ಹಾಗೂ ವಿದ್ಯಾ ಸಂಸ್ಥೆಗಳ ಆವರಣದಿಂದ ನೂರು ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಬಳಕೆ ಮಾಡದಂತೆ ಕಟ್ಟುನಿಟ್ಟಿನ ನಿಗಾ ಇಡುವಂತೆ ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಕ್ಕಳು ಹಾಗೂ ಯುವಜನಾಂಗ ತಂಬಾಕು ಉತ್ಪನ್ನಗಳ ಸೇವನೆಯಿಂದ ದೂರವಿರಬೇಕು. ಮದ್ಯಪಾನ, ಮಾದಕವಸ್ತುಗಳು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮ ಘೋರವಾಗಿದ್ದು, ಕ್ಯಾನ್ಸರ್ ಹಾಗೂ ಸಾವಿಗೂ ಕಾರಣವಾಗುವುದರಿಂದ ಇದರಿಂದ ದೂರ ಇರುವಂತೆ ಸಲಹೆ ನೀಡಿದ್ದಾರೆ.

***************

ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸುವುದನ್ನು ಕಡ್ಡಾಯ ಮಾಡಲಾಗಿದೆ. ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮೂಲಕ ಅತ್ಯಮೂಲ್ಯವಾದ ಜೀವವನ್ನು ಉಳಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮನವಿ ಮಾಡಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಇಂದು ಹಮ್ಮಿಕೊಂಡಿದ್ದ "ಹೆಲ್ಮೆಟ್ ಧರಿಸಿ, ಜೀವ ಉಳಿಸಿ" ಜನ ಜಾಗೃತಿ ಅಭಿಯಾನ ಮತ್ತು ಬೈಕ್ ರ‍್ಯಾಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದ್ವಿಚಕ್ರ ವಾಹನ ಸವಾರರು ಯಾವುದೇ ಕಾರಣಕ್ಕೂ ಹೆಲ್ಮೆಟ್ ನಿರ್ಲಕ್ಷಿಸುವಂತಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

*******ಮುಕ್ತಾಯ*******